# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ


**ಸುಭಾಷಿತ:**

ಮೌನವು ಮನಸ್ಸನ್ನು ಶುದ್ಧಿ ಮಾಡುವುದು
ಸ್ನಾನವು ದೇಹವನ್ನು ಶುದ್ಧಿ ಮಾಡುವುದು
ಧ್ಯಾನವು ಬುದ್ಧಿಯನ್ನು ಶುದ್ಧಿ ಮಾಡುವುದು
ಸತ್ಯವು ಜ್ಞಾನವನ್ನು ಶುದ್ಧಿ ಮಾಡುವುದು
ಪ್ರಾರ್ಥನೆಯು ಆತ್ಮವನ್ನು ಶುದ್ಧಿ ಮಾಡುವುದು
ದಾನವು ಸಂಪಾದನೆಯನ್ನು ಶುದ್ಧಿ ಮಾಡುವುದು
ಉಪವಾಸ ಆರೋಗ್ಯವನ್ನು ಶುದ್ಧಿ ಮಾಡುವುದು
ಕ್ಷಮೆಯು ಸಂಬಂಧವನ್ನು ಶುದ್ಧಿ ಮಾಡುವುದು
ಧರ್ಮದ ದಾರಿ ಎಲ್ಲವನ್ನು ಶುದ್ಧಿ ಮಾಡುವುದು
ಮಾನವೀಯತೆ ಸ್ವರ್ಗದ ದಾರಿ ತೋರಿಸುವುದು

**ಭಗವಾನ್ ಶ್ರೀಕೃಷ್ಣ**




REGD NO: 1327299/KARKAN/2018/26532 www.karavalitharangini.com KARAVALI THARANGINI KANNADA Weekly Mangaluru ದಿನಾಂಕ: 15-08-2025 to 21-08-2025 ಬೆಲೆ: 7-00 ಸಂಪುಟ–5 ಸಂಚಿಕೆ–8 ಪುಟಗಳು–6









ಹಬ್ಬ ಹರಿದಿನಗಳು ಲಗ್ಗೆ ಇಡುತ್ತಿದ್ದು, ವ್ಯಾಪಾರ ವಹಿವಾಟುಗಳು ಗರಿಗೆದರುವ ಸಮಯ ಇದಾಗಿದೆ. ಇಂತಹ ಹಬ್ಬ ಹರಿದಿನಗಳು ಬಂತೆಂದರೆ ಹೂವಿನ ವ್ಯಾಪಾರಿಗಳಿಗೂ ಉತ್ತಮ ವಹಿವಾಟಿನ ಸಮಯ. ಇಂತಹ ಹಬ್ಬ ಹರಿದಿನಗಳಲ್ಲಿ ದೇವರಿಗೆ ಸಮರ್ಪಿತವಾಗುವ ಹೂಗಳು ರಸ್ತೆಯ ಅಕ್ಕಪಕ್ಕಗಳಲ್ಲಿ, ಎಲ್ಲೆಂದರಲ್ಲಿ ಮಾರುವುದು ಸಾಮಾನ್ಯವಾಗಿ ಕಾಣಬಹುದು. ಆದರೆ ವ್ಯಾಪಾರಿಗಳು ಹೂ ಮಾರುವ ಜಾಗಗಳ ಶುಚಿತ್ವದ ಕಡೆ ಗಮನಕೊಟ್ಟು, ಶುಚಿಯಾದ ಜಾಗದಲ್ಲಿ ಒಂದು ಹಲಗೆಯೋ, ಟರ್ಪಾಲೋ ಹಾಕಿ ಅದರ ಮೇಲೆ ಹೂಗಳನ್ನು ಹಾಹಿ ಮಾರುವುದು ಉತ್ತಮ. ಇವುಗಳ ಬಗ್ಗೆ ಸಂಬಂಧ ಪಟ್ಟವರು ಕ್ರಮ ತೆಗೆದುಕೊಂಡರೆ ಹಬ್ಬ ಇನ್ನಷ್ಟು ಕಳೆಗಟ್ಟಬಹುದು.

## ಮಂಗಳೂರನ್ನು ಡೇಟಾ ಸೆಂಟರ್ ಹಬ್ ಆಗಿ ಪರಿವರ್ತಿಸಿ–ಕ್ಯಾ. ಚೌಟ



**ನವದೆಹಲಿ:** ಮಂಗಳೂರನ್ನು ಪ್ರಮುಖ 'ಡೇಟಾ ಸೆಂಟರ್ ಹಬ್' ಆಗಿ ಅಭಿವೃದ್ಧಿಪಡಿಸುವ ಮೂಲಕ ಭಾರತದ ಡಿಜಿಟಲ್ ಬೆಳವಣಿಗೆಯಲ್ಲಿ ನೆಚ್ಚಿನ ನಗರವನ್ನಾಗಿ ರೂಪಿಸುವ ನಿಟ್ಟಿನಲ್ಲಿ ದಕ್ಷಿಣ ಕನ್ನಡ ಸಂಸದ ಕ್ಯಾ. ಬ್ರಿಜೇಶ್ ಚೌಟ ಅವರು ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯದ ಕಾರ್ಯದರ್ಶಿ ಎಸ್. ಕೃಷ್ಣನ್ ಅವರನ್ನು ಭೇಟಿಯಾಗಿ ಅಗ್ರಹಿಸಿದ್ದಾರೆ. ನವದೆಹಲಿಯಲ್ಲಿ ಕಾರ್ಯದರ್ಶಿ ಕೃಷ್ಣನ್ ಅವರನ್ನು ಭೇಟಿಯಾದ ಸಂಸದರು, ಮಂಗಳೂರು ನಗರ ಹೊಂದಿರುವ ಅಗಾಧ ಸಾಮರ್ಥ್ಯ, **3ನೇ ಪುಟಕ್ಕೆ**






## ರಾಹುಲ್ ಗಾಂಧಿ ಮೇಧಾವಿತನ ಈಗ ತಿಳಿಯುತ್ತಿದೆ: ರಮಾನಾಥ್ ರೈ




**ಮಂಗಳೂರು:** ಲೋಕಸಭೆಯ ವಿಪಕ್ಷ ನಾಯಕನಾಗಿ ಚುನಾವಣಾ ಆಯೋಗದ ತಪ್ಪುಗಳನ್ನು ಬಹಿರಂಗಪಡಿಸಿರುವ ರಾಹುಲ್ ಗಾಂಧಿಯವರ ಪ್ರಶ್ನೆಗಳಿಗೆ ಉತ್ತರಿಸುವ ಹೊಣೆ ಚುನಾವಣಾ ಆಯೋಗದ್ದಾಗಿದೆ. ರಾಹುಲ್ ಗಾಂಧಿ ಬಗ್ಗೆ ಏನೇನೋ ಮಾತಾಡಿದರು. ಇಂದು ಅವರ ಮೇಧಾವಿತನ ಈಗ ಎಲ್ಲರಿಗೂ ತಿಳಿಯುತ್ತಿದೆ ಎಂದು ಮಾಜಿ ಸಚಿವ ರಮಾನಾಥ ರೈ ಹೇಳಿದ್ದಾರೆ. ದ.ಕ. ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ನಡೆದ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದ **3ನೇ ಪುಟಕ್ಕೆ**

## ಕಾಂಗ್ರೆಸ್ ನಾಯಕನಿಂದ ಗುರುಗಳಿಗೆ ಅಪಮಾನ –ಡಾ.ಭರತ್ ಶೆಟ್ಟಿ



**ಮಂಗಳೂರು:** ಬ್ರಹ್ಮಶ್ರೀ ನಾರಾಯಣ ಗುರುಗಳ ತತ್ವ ಆದರ್ಶಗಳನ್ನೇ ಪ್ರಶ್ನಿಸುವ ಕಾಂಗ್ರೆಸ್ ಮುಖಂಡರ ಮನಸ್ಥಿತಿ, ಹಾಗೂ ಅವರ ನಕಲಿ ಜಾತ್ಯಾತೀತತೆಯನ್ನು ಜನರು ಅರಿತುಕೊಳ್ಳುವ ಸಮಯ ಬಂದಿದೆ ಎಂದು ಶಾಸಕರಾದ ಡಾ. ಭರತ್ ಶೆಟ್ಟಿ ಹೇಳಿದ್ದಾರೆ. ಪ್ರಪಂಚಕ್ಕೆ ಶ್ರೀ ನಾರಾಯಣ ಗುರುಗಳ ತತ್ವ ಆದರ್ಶಗಳು ಮನುಕುಲದ ಸಮಗ್ರ ಏಳಿಗೆಗೆ ದಾರಿ ದೀಪವಾಗಿದೆ. ಹಿಂದೂ ಸಮಾಜ ಬ್ರಹ್ಮಶ್ರೀ ನಾರಾಯಣ ಗುರುಗಳನ್ನು ದೇವಮಾನ ರೂಪದಲ್ಲಿ ಕಾಣುವಾಗ ಗುರುಗಳ ಹೆಸರೆತ್ತುವ ಯೋಗ್ಯತೆ ಇಲ್ಲದ ಕಾಂಗ್ರೆಸ್ ಮುಖಂಡನೊಬ್ಬ ಗುರುಗಳಿಗೆ ಅಪಮಾನ **3ನೇ ಪುಟಕ್ಕೆ**




# ಮಂಗಳೂರನ್ನು ಡೇಟಾ ಸೆಂಟರ್ ಹಬ್ ಆಗಿ ಪರಿವರ್ತಿಸಿ–ಕ್ಯಾ. ಚೌಟ

ಒಂದನೇ ಪುಟದಿಂದ......

ವ್ಯೂಹಾತ್ಮಕ ಅನುಕೂಲತೆ ಹಾಗೂ ಇಕೋಸಿಸ್ಟಮ್ ಬಗ್ಗೆ ಮನವರಿಕೆ ಮಾಡಿದ್ದಾರೆ. ಇಲ್ಲಿರುವ ಭೌಗೋಳಿಕ, ತಾಂತ್ರಿಕವಾದ ಮೂಲಸೌಕರ್ಯಗಳ ಬಗ್ಗೆ ವಿವರಿಸಿದ ಅವರು, ನಮ್ಮ ಕರಾವಳಿ ಕಡಿಮೆ ಭೂಕಂಪನ ಅಪಾಯವಿರುವ, ಧಾರಾಳ ನೀರಿನ ಸಂಪನ್ಮೂಲ ಮತ್ತು ಸಮುದ್ರಾಂತರ ಇಂಟರ್ನೆಟ್ ಕೇಬಲ್ ಮಾರ್ಗಗಳಿಗೆ ಹತ್ತಿರವಿರುವ ಪ್ರದೇಶವಾಗಿದ್ದು, ಇಲ್ಲಿ ಕೇಬಲ್ ಲ್ಯಾಂಡಿಂಗ್ ಸ್ಟೇಷನ್ ಸ್ಥಾಪಿಸಲು ಸೂಕ್ತ ಸ್ಥಳವಾಗಿದೆ. ಇಂತಹ ಮೂಲಸೌಕರ್ಯವು ಪ್ರಾದೇಶಿಕ ಇಂಟರ್‌ನೆಟ್ ವೇಗವನ್ನು ಸುಧಾರಿಸುವುದರ ಜೊತೆಗೆ ಭಾರತದಡೇಟಾ ಸಾಮರ್ಥ್ಯ ಮತ್ತು ಭದ್ರತೆಯನ್ನು ಗಣನೀಯವಾಗಿ ಹೆಚ್ಚಿಸುತ್ತದೆ ಎಂದು ವಿವರಿಸಿದ್ದಾರೆ. ಬೃಹತ್‌ಡೇಟಾ ಸೆಂಟರ್‌ಗಳ ಸ್ಥಾಪನೆಯು ಜಾಗತಿಕವಾಗಿ ಈಗ ಎಲ್ಲೆಡೆ ಅವಶ್ಯಕ ಮೂಲ ಸೌಕರ್ಯವೆಂದು ಪರಿಗಣಿಸಲಾಗುತ್ತಿದೆ. ಕೃತಕ ಬುದ್ಧಿಮತ್ತೆ, ಕ್ಲೌಡ್ ಕಂಪ್ಯೂಟಿಂಗ್, ಹಣಕಾಸು ವ್ಯವಸ್ಥೆಗಳು ರಾಷ್ಟ್ರೀಯ ಭದ್ರತೆ ಹೀಗೆ ಪ್ರತಿಯೊಂದು ಕ್ಷೇತ್ರ ಹಾಗೂ ಆಯಕಟ್ಟಿನ ಜಾಗಗಳಲ್ಲಿ ಅತ್ಯವಶ್ಯಕ ತಂತ್ರಜ್ಞಾನ ವ್ಯವಸ್ಥೆಯಾಗಿದೆ. ಹೀಗಿರುವಾಗ ಮಂಗಳೂರನ್ನು ಭಾರತದ ಪ್ರಾದೇಶಿಕ ಡೇಟಾ ಬ್ಯಾಕ್‌ಬೋನ್ ಆಗಿ ಬೆಳೆಸುವುದಕ್ಕೆ ವಿಪುಲ ಅವಕಾಶ ಹಾಗೂ ಸಾಮರ್ಥ್ಯವನ್ನು ಹೊಂದಿದೆ. ಈ ಹಿನ್ನಲೆ ಖಾಸಗಿ ಹೂಡಿಕೆಯನ್ನು ಆಕರ್ಷಿಸಲು ಮಂಗಳೂರಿನಲ್ಲಿ ಪ್ರತ್ಯೇಕ ಡೇಟಾ ಸೆಂಟರ್ ವಿಶೇಷ ಆರ್ಥಿಕ ವಲಯವನ್ನು ಸ್ಥಾಪಿಸಲು ಅಗತ್ಯ ಕ್ರಮ ಹಾಗೂ ಪೂರಕ ನೀತಿಯನ್ನು ರೂಪಿಸಬೇಕೆಂದು ಇದೇ ವೇಳೆ ಸಂಸದರು ಸಚಿವಾಲಯಕ್ಕೆ ಸಲಹೆ ನೀಡಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಹುಲ್‌ಗಾಂಧಿ ಮೇಧಾವಿತನ ಈಗ ತಿಳಿಯುತ್ತಿದೆ : ರಮಾನಾಥ್ ರೈ

ಒಂದನೇ ಪುಟದಿಂದ......

ಅವರು, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಸಾಂವಿಧಾನಿಕ ಹುದ್ದೆಗಳಿಂದ ತಪ್ಪುಗಳಾದ ಅದನ್ನು ಪ್ರಶ್ನಿಸುವುದು ವಿಪಕ್ಷದ ಕರ್ತವ್ಯ ಅದನ್ನು ರಾಹುಲ್ ಗಾಂಧಿ ಮಾಡಿದ್ದು, ಅವರನ್ನು ಬೆಂಬಲಿಸುವುದಾಗಿ ಹೇಳಿದರು. ಮತದಾರರ ಪಟ್ಟಿ ಶುದ್ಧೀಕರಣಕ್ಕೆ ರಾಹುಲ್‌ಗಾಂಧಿ ಹೆಜ್ಜೆ ಇರಿಸಿದ್ದು, ಅವರು ಕೇಳಿರುವಂತೆ ಚುನಾವಣಾ ಆಯೋಗ ಕಳೆದ 10 ವರ್ಷಗಳ ವೀಡಿಯೋ ಹಾಗೂ ಸಾಫ್ಟ್‌ಕಾಪಿಯನ್ನು ಒದಗಿಸಬೇಕು. ಹಿಂದೆ ಮಹಾರಾಷ್ಟ್ರದ ಚುನಾವಣೆಯ ಸಂದರ್ಭದಲ್ಲಿಯೇ ರಾಹುಲ್ ಈ ಬಗ್ಗೆ ಧ್ವನಿ ಎತ್ತಿದ್ದರು. ಬಳಿಕ ಹರ್ಯಾಣದ ಚುನಾವಣೆಯ ಸಂದರ್ಭದಲ್ಲೂ ಮಾತನಾಡಿದ್ದಾರೆ. ಆದರೆ ಉತ್ತರದಾಯಿತ್ವ ಹೊಂದಿದವರು ಮೌನ ವಹಿಸಿದ್ದಾರೆ. ಇದೀಗ ಬಿಹಾರದ ಚುನಾವಣೆಯ ಸಂದರ್ಭದಲ್ಲಿ ಇಂತಹ ಪ್ರಶ್ನೆಗಳನ್ನು ಮತ್ತೆ ಎತ್ತಲಾಗಿದೆ. ರಾಹುಲ್ ಅವರ ಮೇಧಾವಿತನವನ್ನು ಒಪ್ಪುವ ಪರಿಸ್ಥಿತಿ ಇದ್ದು, ಚುನಾವಣಾ ಪ್ರಕ್ರಿಯೆ ಪಾರದರ್ಶಕವಾಗಬೇಕಾದರೆ ಮತ ಕಳವು ನಿಲ್ಲಿಸುವಲ್ಲಿ ಎಲ್ಲರ ಪ್ರಯತ್ನ ಅಗತ್ಯವಿದೆ. ಚುನಾವಣಾ ಪ್ರಕ್ರಿಯೆಗಳಲ್ಲಿ ಪಾರದರ್ಶಕತೆ ತರುವಲ್ಲಿ ರಾಹುಲ್‌ಗಾಂಧಿಯ ಪ್ರಶ್ನೆಗಳು ಅವರು ಬಹಿರಂಗ ಪಡಿಸಿರುವ ಮತದಾರರ ಪಟ್ಟಿಯಲ್ಲಿನ ತಪ್ಪುಗಳು ಚರ್ಚೆಯ ವಿಚಾರವಾಗಿದೆ. ಇದಕ್ಕೆ ಚುನಾವಣಾ ಆಯೋಗದಿಂದ ಉತ್ತರ ಬೇಕಾಗಿದೆ. ಆದರೆ ಬಿಜೆಪಿ ಉತ್ತರಿಸುತ್ತಿದೆ. ಈ ಕುರಿತು ಲಿಂಬಾವಳಿಯವರು ನೀಡಿರುವ ಉತ್ತರ ಚುನಾವಣಾ ಆಯೋಗದ ತಪ್ಪು ಒಪ್ಪಿಕೊಂಡು ಪುಷ್ಟಿಕರಣ ನೀಡುವ ಕೆಲಸ ಆಗಿದ್ದು, ಇದು ಗಂಭೀರ ವಿಚಾರ ಎಂದವರು ಹೇಳಿದರು.

# ಕಾಂಗ್ರೆಸ್ ನಾಯಕನಿಂದ ಗುರುಗಳಿಗೆ ಅಪಮಾನ – ಡಾ.ಭರತ್ ಶೆಟ್ಟಿ

ಒಂದನೇ ಪುಟದಿಂದ......

ಮಾಡುವ ಕೆಲಸವನ್ನು ಮಾಡಿದ್ದಾರೆ. ಕೇವಲ ಒಂದು ಜಾತಿ ಪಂಗಡಕ್ಕೆ ಸೀಮಿತವಾಗದೆ ಪೂರ್ತಿ ಸಮಾಜದ ಒಳಿತು ಬಯಸಿ, ಮಾನವಕುಲದ ಉದ್ಧಾರದ ಸಂದೇಶ ಸಾರಿದಂತಹ ಮಹಾನ್ ವ್ಯಕ್ತಿತ್ವ ಶ್ರೀ ನಾರಾಯಣ ಗುರುಗಳದ್ದು. ಹಿರಿಯ ರಾಜಕಾರಣಿ ಜನಾರ್ದನ ಪೂಜಾರಿ ಅವರ ಅಭಿವ್ಯಕ್ತಿ ಸ್ವಾತಂತ್ರ್ಯ ಉಪಯೋಗಿಸಿ ತಮ್ಮ ನಿಲುವನ್ನು ಹೇಳಿದ ಮಾತ್ರಕ್ಕೆ ಕಾಂಗ್ರೆಸ್ ಪಕ್ಷದ ಮುಖಂಡ ಮಹಮ್ಮದ್ ಅಲಿ ಎಂಬಾತ 'ನಿಮ್ಮನ್ನು ಮಂತ್ರಿ ಮಾಡಿದ್ದು ನಾರಾಯಣಗುರುಗಳ ಸಿದ್ಧಾಂತವೋ' ಎಂಬ ಪ್ರಶ್ನೆಯನ್ನು ಮಾಡಿ ಉಡಾಫೆಯ ಮಾತುಗಳನ್ನಾಡಿರುವುದು ಹಿಂದೂ ಸಮಾಜಕ್ಕೆ ಅತೀವ ನೋವನ್ನುಂಟು ಮಾಡಿದೆ. ತಕ್ಷಣ ಕಾಂಗ್ರೆಸ್ ಪಕ್ಷ ಆ ವ್ಯಕ್ತಿಯನ್ನು ವಜಾಗೊಳಿಸಬೇಕು, ಹಾಗೂ ಸಮಾಜದ ಕ್ಷಮೆಯನ್ನು ಯಾಚಿಸಬೇಕು ಎಂದು ಡಾಕ್ಟರ್ ಭರತ್ ಶೆಟ್ಟಿ ಒತ್ತಾಯಿಸಿದ್ದಾರೆ

# ಹಿಂ.ವ ಪತ್ರಕರ್ತರಿಗೆ ಮೀಡಿಯಾ ಕಿಟ್‌ಗೆ ಅರ್ಜಿ ಆಹ್ವಾನ

ಮಂಗಳೂರು–ಪತ್ರಿಕೋದ್ಯಮದಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಸಮುದಾಯಕ್ಕೆ ಸೇರಿರುವ ಪತ್ರಕರ್ತರನ್ನು ಪ್ರೋತ್ಸಾಹಿಸುವ ಸಲುವಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ 2025–26ನೇ ಸಾಲಿಗೆ ಮಾಧ್ಯಮ ಮಾನ್ಯತೆ ಹೊಂದಿರುವ ಪತ್ರಕರ್ತರಿಗೆ "ಮೀಡಿಯಾ ಕಿಟ್" ವಿತರಿಸಲು ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕಚೇರಿಯನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ವಾರ್ತಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಿ.ಹೆಚ್.ಡಿ. ಕಾರ್ಯಕ್ರಮಕ್ಕೆ ಅರ್ಜಿ ಆಹ್ವಾನ

ಮಂಗಳೂರು–ಮಂಗಳೂರು ವಿಶ್ವವಿದ್ಯಾನಿಲಯದ ವಿವಿಧ ಸ್ನಾತಕೋತ್ತರ ವಿಭಾಗಗಳು, ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು, ಹಾಗೂ ಮಾನ್ಯತೆ ಪಡೆದ ಸಂಶೋಧನಾ ಕೇಂದ್ರಗಳಲ್ಲಿ ಪಿ.ಹೆಚ್.ಡಿ ಕಾರ್ಯಕ್ರಮಕ್ಕೆ ಲಭ್ಯವಿರುವ ಖಾಲಿ ಸೀಟುಗಳಿಗೆ ನೋಂದಾಯಿಸಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಮತ್ತು ಅರ್ಜಿ ನಮೂನೆಗಳಿಗೆ ಮಂಗಳೂರು ವಿಶ್ವವಿದ್ಯಾನಿಲಯದ ವೆಬ್‌ಸೈಟ್ www.mangaloreuniversity.ac.in ಮೂಲಕ ಪಡೆದುಕೊಳ್ಳಬಹುದು ಎಂದು ಪ್ರಕಟಣೆ ತಿಳಿಸಿದೆ.

# ಮಾಜಿ ಸೈನಿಕರುಗಳಿಂದ ವಿವಿಧ ಕೋರ್ಸ್‌ಗಳಿಗೆ ಅರ್ಜಿ ಆಹ್ವಾನ

ಶಿವಮೊಗ್ಗ : ಡೈರೆಕ್ಟೊರೇಟ್ ಜನರಲ್ ರಿಸೆಟ್ಲ್ಮೆಂಟ್ ಇವರಿಂದ ಸೇನಾ ಪಡೆಯ ನಿವೃತ್ತ ಅಧಿಕಾರಿಗಳು ಮತ್ತು ಮಾಜಿ ಸೈನಿಕರುಗಳಿಗೆ (ಜೆಸಿಒ/ಇತರೆ ರ್‍ಯಾಂಕ್) ವಿವಿಧ ಸರ್ಟಿಫಿಕೇಟ್ ಕೋರ್ಸ್ಗಳಿಗಾಗಿ ಅರ್ಜಿಯನ್ನು ಆಹ್ವಾನಿಸಲಾಗಿದೆ. ಅರ್ಹತೆಯನ್ನು ಹೊಂದಿರುವ ಮಾಜಿ ಸೇನಾ ಪಡೆಯ ಅಧಿಕಾರಿಗಳು ಹಾಗೂ ಮಾಜಿ ಸೈನಿಕ ಅಭ್ಯರ್ಥಿಗಳು ಅಗತ್ಯ ದಾಖಲೆಗಳೊಂದಿಗೆ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಶಿವಮೊಗ್ಗ ಇಲ್ಲಿ ನೋಂದಣಿಯನ್ನು ಮಾಡಿಕೊಳ್ಳಬಹುದು ಎಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಉಪ ನಿರ್ದೇಶಕ (ಪ್ರ) ಡಾ.ಸಿ.ಎ. ಹಿರೇಮಠ ತಿಳಿಸಿದ್ದಾರೆ.

# ದೇವಾಲಯಗಳ ವ್ಯವಸ್ಥಾಪನಾ ಸಮಿತಿ ರಚನೆಗೆ ಅರ್ಜಿ ಆಹ್ವಾನ

ಶಿವಮೊಗ್ಗ : ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮದಾಯ ದತ್ತಿಗಳ ಕಾಯ್ದೆ ಅಧಿನಿಯಮ 1997ರ ಕಲಂ 25ರನ್ವಯ ಜಿಲ್ಲೆಯ 'ಬಿ' ಮತ್ತು 'ಸಿ' ಪ್ರವರ್ಗ ಮುಜರಾಯಿ ದೇವಾಲಯಗಳ ವ್ಯವಸ್ಥಾಪನಾ ಸಮಿತಿಯನ್ನು ಮುಂದಿನ 3ವರ್ಷಗಳ ಅವಧಿಗೆ ರಚಿಸಲು ರಚಿಸಲು ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂ.ಸಂ. 08182 220925ಗೆ ಸಂಪರ್ಕಿಸಬಹುದು ಎಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಉಪ ನಿರ್ದೇಶಕ (ಪ್ರ) ಡಾ. ಸಿ.ಎ. ಹಿರೇಮಠ ತಿಳಿಸಿದ್ದಾರೆ.

# ವಿಜ್ಞಾನ ಮತ್ತು ವಾಣಿಜ್ಯ ವಿಭಾಗದ ಪ್ರವೇಶಕ್ಕೆ ಅರ್ಜಿ ಆಹ್ವಾನ

ಮಡಿಕೇರಿ–ಗಾಳಿಬೀಡು ಜವಾಹರ ನವೋದಯ ವಿದ್ಯಾಲಯದಲ್ಲಿ 2025–26 ನೇ ಸಾಲಿನ ಖಾಲಿ ಇರುವ 11ನೇ ತರಗತಿಯ ವಿಜ್ಞಾನ ಮತ್ತು ವಾಣಿಜ್ಯ ವಿಭಾಗದ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ ನವೋದಯ ಶಾಲೆಯ ದೂ.ಸಂ.9481426184, 9380802179 https://drive.google.com ನ್ನು ಸಂಪರ್ಕಿಸಬಹುದು.

# ಜಿಲ್ಲಾ ಮಟ್ಟದ ಪ್ರಶಸ್ತಿಗೆ ಅರ್ಜಿ ಆಹ್ವಾನ

ಮಡಿಕೇರಿ : ಅಸಾಧಾರಣ ಸಾಧನೆ ಮಾಡಿದ ಮಕ್ಕಳಿಗೆ ಜಿಲ್ಲಾ ಮಟ್ಟದ ಪ್ರಶಸ್ತಿಗೆ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಮೊಬೈಲ್ ಸಂಖ್ಯೆ 9482194105, 08272–228010ನ್ನು ಸಂಪರ್ಕಿಸಬಹುದು ಎಂದು ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕರು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಿಲಿಕುಳ ಪ್ರಾಣಿಗಳಿಗೆ ಕೊಳೆತ ಆಹಾರ ಸರಬರಾಜು : ದೂರು ದಾಖಲು




ಮಂಗಳೂರು: ಪಿಲಿಕುಳ ಜೈವಿಕ ಉದ್ಯಾನವನದ ಪ್ರಾಣಿಗಳಿಗೆ ಪೂರೈಸುವ ಮಾಂಸಕ್ಕೆ ಕೊಳೆತ ಮತ್ತು ವಿಷಪೂರಿತ ಮಾಂಸವನ್ನು ಬೆರೆಸಿ ಪ್ರಾಣಿಗಳನ್ನು ಕೊಲ್ಲುವ ಹುನ್ನಾರ ನಡೆದಿದೆ ಎಂದು ಆರೋಪಿಸಿ ಪಿಲಿಕುಳ ಜೈವಿಕ ಉದ್ಯಾನದ ನಿರ್ದೇಶಕ ಡಾ.ಪ್ರಶಾಂತ್ ಪೈಯವರು ಕಾವೂರು ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಸದ್ಯ ಹೊಸ ಗುತ್ತಿಗೆದಾರರೊಬ್ಬರು ಮಾಂಸಕ್ಕೆ ಕೊಳೆತ ಅಥವಾ ವಿಷಪೂರಿತ ಮಾಂಸ ಬೆರೆಸಿ ಹೊಸ ಟೆಂಡರುದಾರರ ಮಾಂಸವನ್ನು ತಿರಸ್ಕರಿಸುವಂತೆ ಮಾಡುವ ಹುನ್ನಾರವನ್ನು ಹಿಂದಿನ ಟೆಂಡರುದಾರ ಮಾಡಿದ್ದಾನೆಂದು ಆತನ ನೌಕರನೊಬ್ಬ ಆ.7ರಂದು ಉದ್ಯಾನವನದ ಸಿಬ್ಬಂದಿಗೆ ಕರೆ ಮಾಡಿ ತಿಳಿಸಿದ್ದಾನೆ. ಈ ಮೂಲಕ ಪ್ರಾಣಿಗಳನ್ನು ಕೊಲ್ಲಲು ಹುನ್ನಾರ ನಡೆಸಿರುವುದು ತಿಳಿದುಬಂದಿದೆ. ಈ ಬಗ್ಗೆ ಪರಿಶೀಲಿಸಿ, ಇದರ ಹಿಂದೆ ಯಾರಿದ್ದಾರೆ ಎಂಬುದರ ಬಗ್ಗೆ ತನಿಖೆ ನಡೆಸಿ ಕ್ರಮ ಕೈಗೊಳ್ಳುವಂತೆ ದೂರಿನಲ್ಲಿ ಆಗ್ರಹಿದ್ದಾರೆ ಎಂದು ವರದಿಯಾಗಿದೆ. ಆರೋಪಿ ಪ್ರಾಣಿಗಳಿಗೆ ಕೊಡುವ ಆಹಾರಕ್ಕೆ ವಿಷಪೂರಿತ ಅಂಶಗಳನ್ನು ಹಾಕುವ ಬಗ್ಗೆ ಯೋಜನೆ ಹಾಕಿದ್ದು, ಅದನ್ನು ಅನುಷ್ಟಾನ ಮಾಡಿರಲಿಲ್ಲ ಎಂದು ತನಿಖೆಯಲ್ಲಿ ತಿಳಿದುಬಂದಿರುವುದಾಗಿ ಪೊಲೀಸರು ತಿಳಿಸಿದ್ದಾರೆ.

# ಚಿನ್ನ ಬಾಚಿದ ಉಜಿರೆಯ ಮೊಹಮ್ಮದ್ ರಯ್ಯಾನ್

ಉಜಿರೆ: ಶಿವಮೊಗ್ಗದ ನೆಹರು ಇನ್ ಡೋರ್ ಸ್ಟೇಡಿಯಂನಲ್ಲಿ ನಡೆದ 6ನೇ ಅಂತಾರಾಷ್ಟ್ರೀಯ ಕರಾಟೆ ಚಾಂಪಿಯನ್ ಶಿಪ್–2025ರಲ್ಲಿ ಉಜಿರೆಯ ಅನುಗ್ರಹ ಅಂಗ್ಲ ಮಾಧ್ಯಮ ಶಾಲೆಯ 7ನೇ ತರಗತಿ ವಿದ್ಯಾರ್ಥಿ ಮುಹಮ್ಮದ್ ರಯ್ಯಾನ್ ಪ್ರಥಮ ಸ್ಥಾನದೊಂದಿಗೆ ಎರಡು ಚಿನ್ನದ ಪದಕಗಳನ್ನು ಗಳಿಸಿದ್ದಾರೆ. ರಯ್ಯಾನ್ ಕರಾಟೆಯ ಕಟಾ ಮತ್ತು ಫೈಟಿಂಗ್ ವಿಭಾಗದಲ್ಲಿ ಪ್ರಥಮ ಸ್ಥಾನದೊಂದಿಗೆ ಚಿನ್ನದ ಪದಕ ಪಡೆದಿದ್ದಾರೆ. ಸತತ 2ನೇ ಬಾರಿ ಅಂತಾರಾಷ್ಟ್ರೀಯ ಮಟ್ಟದಲ್ಲಿ ಈ ಪ್ರಶಸ್ತಿ ಗಳಿಸಿರುವ ಹೆಗ್ಗಳಿಕೆ ಇವರದ್ದಾಗಿದೆ. ಇವರು ಉಜಿರೆಯ ಆರ್.ಆರ್.ಸಿ.ಸಿ.ಟಿವಿ ಮಾಲಕ ಬಿ.ಎಚ್.ಇಬ್ರಾಹೀಂ ಮತ್ತು ನೂರ್ ಜಹಾನ್ ದಂಪತಿ ಪುತ್ರ.




2024ರ ಸೆಪ್ಟೆಂಬರ್ ನಲ್ಲಿ ಮಂಗಳೂರಿನಲ್ಲಿ ನಡೆದ ಅಂತಾರಾಷ್ಟ್ರೀಯ ಕರಾಟೆಯಲ್ಲೂ ರಯ್ಯಾನ್ ಪ್ರಥಮ ಸ್ಥಾನ ಮತ್ತು 2 ಚಿನ್ನದ ಪದಕಗಳನ್ನು ಜಯಿಸಿದ್ದರು. ಅವರಿಗೆ ಸಿಹಾನ್ ಅಬ್ದುಲ್ ರಹ್ಮಾನ್ ತರಬೇತಿ ನೀಡಿದ್ದಾರೆ.

# ಕೆಂಪು ಕಲ್ಲು ಸರಬರಾಜಿಗೆ ಹೊಸ ಕಾನೂನು ರಚಿಸಲು ಸಭೆ



ಮಂಗಳೂರು: ದ.ಕ. ಜಿಲ್ಲೆಯಲ್ಲಿ ಕೆಂಪುಕಲ್ಲು ಗಣಿಗಾರಿಕೆಗೆ ಸಂಬಂಧಿಸಿ ಶೀಘ್ರದಲ್ಲೇ ಹೊಸ ನಿಯಮ ಜಾರಿಯಾಗಲಿದೆ. ದಕ್ಷಿಣ ಕನ್ನಡ ಜಿಲ್ಲೆ ಸೇರಿದಂತೆ ಕರಾವಳಿ ಭಾಗದಲ್ಲಿ ಕೆಂಪು ಕಲ್ಲು ಗಣಿಗಾರಿಕೆಗೆ ಕಾನೂನಿನ ಅನ್ವಯ ಅವಕಾಶ ಕಲ್ಪಿಸುವ ವಿಚಾರದಲ್ಲಿ ಬೆಂಗಳೂರಿನ ವಿಧಾನ ಸೌಧದಲ್ಲಿ ನಡೆದ ಸಭೆಯಲ್ಲಿ ನಿರ್ಧಾರ ಕೈಗೊಳ್ಳಲಾಗಿದೆ. ವಿಧಾನ ಸಭೆಯ ಸ್ಪೀಕರ್ ಯು.ಟಿ. ಖಾದರ್ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ದ.ಕ. ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂ ರಾವ್, ಕಂದಾಯ ಸಚಿವ ಕೃಷ್ಣಬೈರೇಗೌಡ, ಗಣಿ ಸಚಿವರಾದ ಎಸ್.ಎಸ್ ಮಲ್ಲಿಕಾರ್ಜುನ್, ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ ಖರ್ಗೆ ಸೇರಿದಂತೆ, ಉತ್ತರ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ವೈದ್ಯ ಉಡುಪಿ ಜಿಲ್ಲಾ ಉಸ್ತುವಾರಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹಾಗೂ ಕರಾವಳಿ ಜಿಲ್ಲೆಗಳ ವಿವಿಧ ಕ್ಷೇತ್ರಗಳ ಎಲ್ಲ ಪಕ್ಷಗಳ ಶಾಸಕರು, ಉನ್ನತ ಮಟ್ಟದ ಅಧಿಕಾರಿಗಳು ಪಾಲ್ಗೊಂಡಿದ್ದರು. ದಕ್ಷಿಣ ಕನ್ನಡ ಜಿಲ್ಲೆ ಸೇರಿದಂತೆ, ಕರಾವಳಿ ಭಾಗದಲ್ಲಿ ಕೆಂಪುಕಲ್ಲು ಗಣಿಗಾರಿಕೆಗೆ ಇರುವ ಅಡೆತಡೆಗಳನ್ನು ನಿವಾರಿ ಸುವ ನಿಟ್ಟಿನಲ್ಲಿ ಪೂರ್ವಭಾವಿ ಸಭೆಗಳಲ್ಲಿ ನಡೆದ ಚರ್ಚೆಗಳು, ಹಾಗೂ ಪರಿಷ್ಕೃತ ನಿಯಮ ಜಾರಿಗೆ ತರುವ ನಿಟ್ಟಿನಲ್ಲಿ ಕೈಗೊಳ್ಳುತ್ತಿರುವ ಕ್ರಮಗಳ ಕುರುತಂತೆ ಸಭೆಯಲ್ಲಿ ಗಣಿ ಇಲಾಖೆ ಅಧಿಕಾರಿಗಳು ಸಭೆಗೆ ಮಾಹಿತಿ ಒದಗಿಸಿದರು.

# ಅಂಗನವಾಡಿ ನೇಮಕಾತಿಯಲ್ಲಿ ಯಾರಿಗೂ ಅನ್ಯಾಯವಾಗಿಲ್ಲ–ಹೆಬ್ಬಾಳ್ಕರ್

ಉಡುಪಿ : ಅಂಗನವಾಡಿ ಕಾರ್ಯಕರ್ತೆಯರ ನೇಮಕಾತಿಯಲ್ಲಿ ಯಾರಿಗೂ ಯಾವುದೇ ರೀತಿಯ ಅನ್ಯಾಯವಾಗಿಲ್ಲ. ಜಿಲ್ಲಾಧಿಕಾರಿಗಳ ನೇತೃತ್ವದ ಸಮಿತಿಯಲ್ಲಿ ಪಾರದರ್ಶಕವಾಗಿ ಆಯ್ಕೆ ನಡೆದಿದೆ. ಆಯ್ಕೆಯಲ್ಲಿ ಯಾವುದೇ ಹಸ್ತಕ್ಷೇಪ ಆಗಿಲ್ಲ ಎಂದು ರಾಜ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಸ್ಪಷ್ಟ ಪಡಿಸಿದ್ದಾರೆ. ಬೆಂಗಳೂರಿನಲ್ಲಿ ನಡೆದಿರುವ ರಾಜ್ಯ ವಿಧಾನಸಭೆ ಮಳೆಗಾಲದ ಅಧಿವೇಶನದ ಮೂರನೇ ದಿನವಾದ ಬುಧವಾರ ಕುಂದಾಪುರ ಶಾಸಕ ಕಿರಣ್ ಕುಮಾರ್ ಕೊಡ್ಗಿ ಕೇಳಿದ ಪ್ರಶ್ನೆಗೆ ಅವರು ಉತ್ತರಿಸುತಿದ್ದರು. ಉಡುಪಿ ಜಿಲ್ಲೆಯಲ್ಲಿ 52 ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳಲಾಗಿದೆ. ಈ ಪೈಕಿ 51 ಮಂದಿಗೆ ಆದೇಶ ಪತ್ರ ನೀಡಲಾಗಿದೆ. ಓರ್ವ ಅಭ್ಯರ್ಥಿ ವಿದ್ಯಾ ಗೋವಿಂದ್




ಪೂಜಾರಿ ಅವರ ಆಯ್ಕೆಗೆ ಆಕ್ಷೇಪಣೆ ಬಂದ ಹಿನ್ನೆಲೆಯಲ್ಲಿ ಅವರ ಆಯ್ಕೆಯನ್ನು ತಡೆಹಿಡಿಯಲಾಗಿತ್ತು. ಇದೀಗ ಅವರಿಗೂ ಆದೇಶ ಪತ್ರ ನೀಡಲಾಗಿದೆ ಎಂದು ಸಚಿವೆ ಉತ್ತರಿಸಿದರು. ಎಲ್ಲರಿಗೂ ನ್ಯಾಯ ಒದಗಿಸಿಕೊಡುವುದೇ ನಮ್ಮ ಸರಕಾರದ ಉದ್ದೇಶ, ಶಿಕ್ಷಕರ ಆಯ್ಕೆಯಲ್ಲಿ ಯಾವುದೇ ಹಸ್ತಕ್ಷೇಪ ನಡೆದಿಲ್ಲ. ಯಾವುದೇ ಒತ್ತಡಕ್ಕೂ ಮಣಿದಿಲ್ಲ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.


# ಅಪಪ್ರಚಾರಗಳ ನಡುವೆಯೂ ಯಶಸ್ವಿಯಾದ ಗ್ಯಾರಂಟಿ: ಸೊರಕೆ




ಉಡುಪಿ : ಪ್ರತಿಪಕ್ಷಗಳ ಹಾಗೂ ಕಾಂಗ್ರೆಸ್ ವಿರೋಧಿಗಳ ಅಪಪ್ರಚಾರದ ಹೊರತಾಗಿಯೂ ರಾಜ್ಯ ಕಾಂಗ್ರೆಸ್ ಸರಕಾರದ ಪಂಚ ಗ್ಯಾರಂಟಿ ಯೋಜನೆ ರಾಜ್ಯದಲ್ಲಿ ಯಶಸ್ಸನ್ನು ಕಂಡಿದೆ. ಇದು ರಾಜ್ಯದ ಆರ್ಥಿಕತೆಗೆ ಉತ್ತೇಜನವನ್ನು ನೀಡಿದೆ ಎಂದು ಕೆಪಿಸಿಸಿ ಪ್ರಚಾರ ಸಮಿತಿಯ ಅಧ್ಯಕ್ಷ, ಮಾಜಿ ಸಚಿವ ವಿನಯಕುಮಾರ್ ಸೊರಕೆ ಹೇಳಿದ್ದಾರೆ. ಉಡುಪಿ ಪ್ರೆಸ್ ಕ್ಲಬ್‌ನಲ್ಲಿ ಇಂದು ಕರೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸರಕಾರದ ಗ್ಯಾರಂಟಿ ಯೋಜನೆಯಿಂದಾಗಿ ರಾಜ್ಯದ ಮಹಿಳೆಯರು ಸಬಲೀಕರಣಗೊಂಡಿದ್ದಾರೆ. ಯೋಜನೆ ನೇರವಾಗಿ ಜನರನ್ನು ತಲುಪುವುದರಿಂದ ಇದರಲ್ಲಿ ಯಾವುದೇ ಭ್ರಷ್ಟಾಚಾರಕ್ಕೆ ಅವಕಾಶವಿಲ್ಲವಾಗಿದೆ ಎಂದರು. ಗ್ಯಾರಂಟಿ ಯೋಜನೆಗಳು ಜನರ ಆದಾಯ ಹೆಚ್ಚಿಸುವ ಕಾರ್ಯಕ್ರಮವಾಗಿತ್ತು. ಇದರ ಮೂಲಕ ಪ್ರತಿ ವರ್ಷ ಕುಟುಂಬಕ್ಕೆ ಕನಿಷ್ಠ 82,000ರೂ.ಗಳ ಆದಾಯವನ್ನು ನೀಡುವ ಯೋಜನೆ ಇದಾಗಿತ್ತು. ಈ ಮೂಲಕ ಜನರ ಹಸಿವನ್ನು ನೀಗಿಸಿ ಅವರನ್ನು ಬಡತನದ ರೇಖೆಗಿಂತ ಮೇಲಕ್ಕೇತ್ತುವ ಕಾರ್ಯಕ್ರಮ ಇದಾಗಿದ್ದು, ಇದರಲ್ಲಿ ನಾವಿಂದು ಯಶಸ್ಸು ಸಾಧಿಸಿದ್ದೇವೆ ಎಂದರು.

# ಉಪ್ಪುನೀರು ತಡೆಗೆ ತುರ್ತು ಕಾಮಗಾರಿ: ಶಾಸಕ ಗುರ್ಮೆ ಆಗ್ರಹ

ಉಡುಪಿ : ಕಾಪು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 26 ಕಿ.ಮೀ. ಉದ್ದದ ಸಮುದ್ರ ತೀರ ಇದ್ದು, ಪ್ರಮುಖ ನದಿಗಳಾದ ಶಾಂಭವಿ, ಕಾಮಿನಿ, ಪಿನಾಕಿನಿ, ಪಾಪನಾಶಿನಿ ನದಿಗಳು ಉಬ್ಬರದ ಸಂದರ್ಭದಲ್ಲಿ ಹಿಮ್ಮುಖವಾಗಿ ಹರಿಯುವುದರಿಂದ ತೋಟಗಳಿಗೆ ಹಾಗೂ ಕೃಷಿ ಭೂಮಿಗೆ ಉಪ್ಪು ನೀರು ನುಗ್ಗಿ ಬೆಳೆ ಹಾನಿ ಉಂಟಾಗುತ್ತಿದೆ ಎಂದು ಕಾಪು ಶಾಸಕ ಗುರ್ಮೆ ಸುರೇಶ್ ಶೆಟ್ಟಿ ಅವರು ಇಂದು ವಿಧಾನಸಭೆಯಲ್ಲಿ ಸದನದ ಗಮನ ಸೆಳೆದರು.



# ರಾಸಾಯನಿಕ ಬಣ್ಣಗಳಿಂದ ಕೂಡಿದ ವಿಗ್ರಹ ವಿಸರ್ಜನೆ ನಿಷೇಧ



ಮಂಗಳೂರು: ಪ್ರತಿ ವರ್ಷದಂತೆ ಈ ಬಾರಿಯೂ ಸ್ವರ್ಣಗೌರಿ ಹಾಗೂ ವರಸಿದ್ಧಿ ವಿನಾಯಕ ಚತುರ್ಥಿ ಹಬ್ಬವು ಸಮೀಪಿಸುತ್ತಿದ್ದು, ಈ ಸಂದರ್ಭದಲ್ಲಿ ಸಾರ್ವಜನಿಕರು ಪ್ಲಾಸ್ಟರ್ ಆಫ್ ಪ್ಯಾರಿಸ್ ಮತ್ತು ಬಣ್ಣದ ವಿಗ್ರಹಗಳನ್ನು ಸ್ಥಾಪಿಸಿ ಪೂಜಿಸಿದ ನಂತರ ಕೆರೆ /ಬಾವಿ ಹಾಗೂ ಇನ್ನಿತರ ನೈಸರ್ಗಿಕ ಜಲ ಮೂಲಗಳಿಗೆ ವಿಸರ್ಜಿಸುವುದು ಸಂಪ್ರಾದಯವಾಗಿದ್ದು, ಇದರಿಂದ ನೈಸರ್ಗಿಕ ಜಲಮೂಲಗಳು ಕಲುಷಿತಗೊಂಡು ಇವುಗಳ ಭೌತಿಕ ಹಾಗೂ ರಾಸಾಯನಿಕ ಗುಣಮಟ್ಟವು ಮಾರ್ಪಟ್ಟು ಪರಿಸರದ ಮೇಲೆ ದುಷ್ಪರಿಣಾಮ ಉಂಟಾಗುವುದಲ್ಲದೇ ಪ್ರಾಣಿ, ಪಕ್ಷಿ ಹಾಗೂ ಇತರೇ ಜಲಚರಗಳ ಜೀವಕ್ಕೆ ಅಪಾಯವಾಗುತ್ತದೆ. ಅಲ್ಲದೇ ಇಂತಹ ಕಲುಷಿತ ನೀರಿನಿಂದ ಸಾರ್ವಜನಿಕ ಆರೋಗ್ಯಕ್ಕೂ ಧಕ್ಕೆ ಉಂಟಾಗುತ್ತದೆ. ಹೈಕೋರ್ಟ್ ಆದೇಶ ಮತ್ತು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಅಧಿಸೂಚನೆ ತಿಳಿಸಿರುವಂತೆ ಹಬ್ಬದ ಆಚರಣೆಯಿಂದ ಉಂಟಾಗುವ ಮಾಲಿನ್ಯದಿಂದ ನೈಸರ್ಗಿಕ ಜಲ ಮೂಲಗಳನ್ನು ಸಂರಕ್ಷಿಸುವ ನಿಟ್ಟಿನಲ್ಲಿ ಅಧಿಸೂಚನೆಯನ್ನು ಹೊರಡಿಸಿದ್ದು, ಪ್ಲಾಸ್ಟರ್ ಆಫ್ ಪ್ಯಾರಿಸ್ ಮತ್ತು ಬಣ್ಣ ಲೇಪಿತವಾದ ಗೌರಿ ಮತ್ತು ಗಣೇಶ ವಿಗ್ರಹಗಳನ್ನು ಇನ್ನು ಮುಂದೆ ರಾಜ್ಯದ ಯಾವುದೇ ಕೆರೆ, ಬಾವಿ, ಕಟ್ಟೆ ಮತ್ತು ಇತರೆ ಜಲಮೂಲಗಳಲ್ಲಿ ವಿಸರ್ಜಿಸುವುದನ್ನು ನಿಷೇಧಿಸಲಾಗಿದೆ.

# ಗಾನ ಸುಧೆ ಹರಿಸಿದ ಹಿಂದೂಸ್ತಾನಿ ಗಾಯಕ ಪಂ. ಕುಮಾರ್ ಮರ್ದೂರ್

ಮಂಗಳೂರು; ಕಲಾಸಾಧನ ಮಂಗಳೂರು ಇದರ ವತಿಯಿಂದ ಸ್ವರಧಾರಾ ಸಂಗೀತ ಉತ್ಸವವನ್ನು ರವಿವಾರ ಸಂಜೆ ನಗರದ ಓಶಿಯನ್ ಪರ್ಲ್ ಸಭಾಂಗಣದಲ್ಲಿ ನಡೆದ ಕಲಾ ಸಾಧನ 'ಸ್ವರಧಾರ' ಸಂಗೀತ ಉತ್ಸವದಲ್ಲಿ ಹಿಂದೂಸ್ತಾನಿ ಗಾಯಕ ಪಂಡಿತ್ ಕುಮಾರ್ ಮರ್ದೂರ್ ಅವರು ಹಿಂದೂಸ್ತಾನಿ ಗಾಯನ ಶ್ರೀ ಶ್ರೀಪಾದರಾಜರ ಕೃತಿ ಹರೇ ವೆಂಕಟಾ ಶೈಲವಲ್ಲಭ ಪಾಲಿಸು ನೀ ಎನ್ನಾ ದುರಿತ ದೂರ ನೀನಲ್ಲದೆ ಧರೆಯೊಳು ದೊರೆಗಳ ನಾ ಕಾಣೆ, ಶ್ರೀ ಶಂಕರಾಚಾರ್ಯರ ಸೇರಿದಂತೆ ಹಿಂದೂಸ್ತಾನಿ.... ಭಕ್ತಿ, ಭಜನ್ ಸಂಗೀತದೊಂದಿಗೆ ನರೆದ ಪ್ರೇಕ್ಷಕ ಸಮೂಹದಲ್ಲಿ




ಸಂಗೀತ ರಸಧಾರೆ ಹರಿಸಿದರು.ಅವರ ಜೊತೆ ಅಕ್ಷಯ ಜೋಶಿ ಧಾರವಾಡ್ ತಬಲಾ ಮತ್ತುಸತೀಶ್ ಭಟ್ ಹೆಗ್ಗಾರ್ ಹಾರ್ಮೊನಿಯಂ ಸಾಥ್ ನೀಡಿದರು. ಮಂಗಳೂರು ಪೊಲೀಸ್ ಆಯುಕ್ತ ಸುಧೀರ್ ಕುಮಾರ್ ರೆಡ್ಡಿ ಉದ್ಘಾಟಿಸಿ ಶುಭ ಹಾರೈಸಿದರು.

# ಯುವಜನತೆಗಾಗಿ ಭಾರತ ಸಮೃದ್ಧವಾಗಬೇಕು – ನಿರ್ಮಲ ಸೀತಾರಾಮನ್




ಉಡುಪಿ: ಸವಾಲುಗಳನ್ನು ಮೆಟ್ಟಿ ನಿಂತು, ಯುವಜನತೆಗಾಗಿ ಭಾರತ ಸಮೃದ್ಧವಾಗಬೇಕು. ಈ ನಿಟ್ಟಿನಲ್ಲಿ ಒಂದಾಗಬೇಕಾದ ಭಾರತೀಯರಿಗೆ ದೇಶ ಸೇವೆಯೇ ದೇವರ ಸೇವೆಯಾಗಬೇಕು ಎಂದು ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ. ಅವರು ಪರ್ಯಾಯ ಪುತ್ತಿಗೆ ಮಠ, ಶ್ರೀಕೃಷ್ಣಮಠದ ವತಿಯಿಂದ ಶ್ರೀಕೃಷ್ಣಮಠದ ಯಾಳಿ (ಸುತ್ತು ಪೌಳಿ) ಹಾಗೂ ಗೀತಾ ಮಂದಿರದಲ್ಲಿ ಶ್ರೀಪುತ್ತಿಗೆ ವಿಶ್ವ ವಿದ್ಯಾಪೀಠದ ಉದ್ಘಾಟನೆ ಬಳಿಕ ರಾಜಾಂಗಣದಲ್ಲಿ ಶನಿವಾರ ನಡೆದ ಸಮಾರಂಭದಲ್ಲಿ ಭಾರತ ಲಕ್ಷ್ಮೀ ಬಿರುದು ಸ್ವೀಕರಿಸಿ ಮಾತನಾಡಿದರು. ಭಾರತ ಮಾತೆಯನ್ನು ಹೃದಯಲ್ಲಿಟ್ಟು ಪೂಜಿಸುವ ಮನಸ್ಥಿತಿ ನಮ್ಮದಾಗಬೇಕು. ಶ್ರೀಕೃಷ್ಣ, ಗುರುಗಳು ಹಾಗೂ ಭಾರತ ಮಾತೆಯ ಅನುಗ್ರಹ ದೇಶ ಹಾಗೂ ಸ್ವಾರ್ಥವಿಲ್ಲದ ಪ್ರಧಾನಿಗಿರಲಿ. ಜಗತ್ತಿಗೆ ಶ್ರೀಕೃಷ್ಣನ ಸಂದೇಶ ಪ್ರಸಾರ, ಕೋಟಿ ಗೀತಾ ಲೇಖನ ಯಜ್ಞದಂತಹ ಶ್ಲಾಘನೀಯ ಕಾರ್ಯ ಪುತ್ತಿಗೆ ಶ್ರೀಗಳಿಂದಾಗುತ್ತಿದೆ ಎಂದರು. ರಾಜ್ಯಸಭಾ ಸದಸ್ಯೆ ಸುಧಾಮೂರ್ತಿ ಮಾತನಾಡಿ, ವಿದೇಶದಲ್ಲಿ ಮನೆ ಕಟ್ಟಬಹುದು. ಆದರೆ, ಮಠ ಕಟ್ಟೋದು ಸುಲಭವಲ್ಲ. ಭಾರತೀಯ ಸಂಸ್ಕೃತಿ, ಧರ್ಮದ ಕಂಪನ್ನು ವಿದೇಶದಲ್ಲಿ ಪರ್ಯಾಯ ಪುತ್ತಿಗೆ ಶ್ರೀ ಹರಡಿದ್ದಾರೆ ಎಂದು ಹೇಳಿದರು.

# ಕೆನರಾ ಶಿಕ್ಷಣ ಸಂಸ್ಥೆಯಲ್ಲಿ ಗೋಕುಲಾಷ್ಟಮಿ–2025

ಮಂಗಳೂರು:ಕೆನರಾ ಹೈ ಸ್ಕೂಲ್ ಅಸೋಸಿಯೇಷನ್, ಮಂಗಳೂರು, ಕೆನರಾ ಸಾಂಸ್ಕೃತಿಕ ಅಕಾಡೆಮಿಯ ಪ್ರಾಯೋಜಕತ್ವದಲ್ಲಿ, ಗೋಕುಲಾಷ್ಟಮಿ–2025 ಪ್ರಯುಕ್ತ ಮುದ್ದು ಕೃಷ್ಣ ವೇಷ ಸ್ಪರ್ಧೆವನ್ನು ಭವ್ಯವಾಗಿ ಆಯೋಜಿಸಲಾಯಿತು. ಭಾರತೀಯ ಪರಂಪರೆ ಮತ್ತು ಸಾಂಸ್ಕೃತಿಕ ಮೌಲ್ಯಗಳನ್ನು ವಿದ್ಯಾರ್ಥಿ ಹಾಗೂ ಯುವ ಸಮುದಾಯದಲ್ಲಿ ಬೆಳೆಸುವ ಉದ್ದೇಶದಿಂದ ಈ ವಿಶೇಷ ಕಾರ್ಯಕ್ರಮವನ್ನು ನಡೆಸಲಾಯಿತು. ಟಿವಿ ರಮಣ ಪೈ ಕನ್ವೆನ್ಷನ್ ಸೆಂಟರ್ ನಲ್ಲಿ ನಡೆದ ಈ ಕಾರ್ಯಕ್ರಮವನ್ನು ದೀಪ ಬೆಳಗಿಸುವ ಮೂಲಕ ಕೆನರಾ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಡಿ. ವಾಸುದೇವ ಕಾಮತ್ ಉದ್ಘಾಟಿಸಿದರು. ಉಪಾಧ್ಯಕ್ಷ ಕೆ. ಸುರೇಶ್ ಕಾಮತ್, ಸದಸ್ಯರಾದ ಡಿ. ವಿಕ್ರಂ ಪೈ, ಸಿ.ಎ. ಗಿರಿಧರ ಕಾಮತ್, ಕೆನರಾ ಪ್ರೌಢಶಾಲೆ ಮೈನ್ ಇದರ ಸಂಚಾಲಕರಾದ ಅಶ್ವಿನಿ ಕಾಮತ್,



ಸಾರ್ವಜನಿಕ ಸಂಪರ್ಕ ಅಧಿಕಾರಿ ಶ್ರೀಮತಿ ಉಜ್ವಲ್ ಮಲ್ಯ, ಕಾರ್ಯಕ್ರಮ ಸಂಯೋಜಕರಾದ ಶ್ರೀಮತಿ ಮಮತಾ ಪೈ ಹಾಗೂ ಶ್ರೀಮತಿ ಸುಶ್ಮಿತಾ ಅವರು ಉಪಸ್ಥಿತರಿದ್ದರು. ಈ ಸಂದರ್ಭದಲ್ಲಿ ಸಂಘಟಕರ ಪರವಾಗಿ ಡಿ. ವಾಸುದೇವ ಕಾಮತ್ ಮಾತನಾಡಿ, "ಮಕ್ಕಳಲ್ಲಿ ಸಂಸ್ಕೃತಿ ಮತ್ತು ಮೌಲ್ಯಗಳನ್ನು ಬೆಳೆಸುವ ಪ್ರಯತ್ನದಲ್ಲಿ ಇಂತಹ ಸಾಂಸ್ಕೃತಿಕ ಕಾರ್ಯಕ್ರಮಗಳು ಮಹತ್ತರ ಪಾತ್ರ ವಹಿಸುತ್ತವೆ" ಎಂದು ಅಭಿಪ್ರಾಯಪಟ್ಟರು.


# ಪರಿಶ್ರಮವೇ ಯಶಸ್ಸಿನ ಬೀಗ–ರಾಜೇಶ್ ನಾಯ್ಕ್



ಮೂಡುಬಿದಿರೆ: ಇಂದಿನ ಯುಗದಲ್ಲಿ ಕೃಷಿಯನ್ನು ವೃತ್ತಿಯಾಗಿ ಆಯ್ಕೆ ಮಾಡುವುದು ಕೇವಲ ಪರಂಪರೆಯ ನಿರ್ವಹಣೆಯಲ್ಲ, ಅದೊಂದು ಜಾಣ ಆಯ್ಕೆ ಎಂದು ಸಾವಯವ ಕೃಷಿಕ ಹಾಗೂ ಶಾಸಕ ರಾಜೇಶ್ ನಾಯ್ಕ್ ನುಡಿದರು. ಅವರು ಆಳ್ವಾಸ್ ಮ್ಯಾನೇಜ್ಮೆಂಟ್ ವಿಭಾಗದ ಟ್ರಿಮ್ ಬ್ಲೇಜ್ ವೇದಿಕೆಯಲ್ಲಿ, ಕುವೆಂಪು ಹಾಲ್‌ನಲ್ಲಿ ಶುಕ್ರವಾರ ಆಯೋಜಿಸಿದ್ದ ವಿಶೇಷ ಅತಿಥಿ ಉಪನ್ಯಾಸ–'ನೆಲದಿಂದ ನೆಲೆವರೆಗೆ. ಕೃಷಿ ಉದ್ಯಮಿಯ ಯಶೋಗಾಥೆ' ಕಾರ್ಯಕ್ರಮದಲ್ಲಿ ಮಾತನಾಡಿದರು. ಕೃಷಿಯಲ್ಲಿ ವರ್ಷದಲ್ಲಿ ಕೇವಲ ಎರಡು ತಿಂಗಳು ಶ್ರಮಿಸಿದರೆ, ಉಳಿದ ಹತ್ತು ತಿಂಗಳು ಇತರ ಚಟುವಟಿಕೆಗಳಿಗೆ ಮೀಸಲಿಡಲು ಸಾಧ್ಯ. ಎಲ್ಲಾ ವೃತ್ತಿಗಳಿಗಿಂತಲೂ ಕೃಷಿಯೇ ಹೆಚ್ಚು ಸಂತಸ ಮತ್ತು ತೃಪ್ತಿ ನೀಡುವ ಉದ್ಯೋಗವಾಗಿದೆ ಎಂದು ಅವರು ಹೇಳಿದರು. ಮಂಗಳೂರಿನ ಸಮೀಪ ಒಡ್ಡೂರಿನಲ್ಲಿರುವ 150ಎಕರೆ ಬಂಜರು ಭೂಮಿಯನ್ನು ಸಾವಯವ ಕೃಷಿ ತೋಟವನ್ನಾಗಿ ಪರಿವರ್ತಿಸಿದ ಪರಿಯನ್ನು ವಿದ್ಯಾರ್ಥಿಗಳೊಂದಿಗೆ ಹಂಚಿಕೊಂಡರು. ಹಲವಾರು ಸವಾಲುಗಳನ್ನು ಎದುರಿಸಿದರೂ, ನಿರಂತರ ಶ್ರಮ, ಹೋರಾಟ ಮನೋಭಾವ ಮತ್ತು ಸದಾ ಆಶಾವಾದೊಂದಿಗಿನ ಮನಸ್ಥಿತಿಯಿಂದ ಈ ಸಾಧನೆ ಸಾಧ್ಯವಾಯಿತು ಎಂದರು.

# ಸ್ವಾತಂತ್ರ್ಯ ಯೋಧ ಮಟ್ಟಾರು ವಿಠಲ ಕಿಣಿಗೆ ಗೌರವಾರ್ಪಣೆ


ಮಂಗಳೂರು : ಕ್ವಿಟ್ ಇಂಡಿಯಾ ದಿನಾಚರಣೆಯ ಅಂಗವಾಗಿ ಶನಿವಾರ ಜಿಲ್ಲಾಡಳಿತ ವತಿಯಿಂದ ಹಿರಿಯ ಸ್ವಾತಂತ್ರ್ಯ ಯೋಧ ಮಟ್ಟಾರು ವಿಠಲ ಕಿಣಿ ಅವರಿಗೆ ಗೌರವ ಸಲ್ಲಿಸಲಾಯಿತು. ನಗರದ ಕುದ್ರೋಳಿ ಅಳಕೆಯಲ್ಲಿರುವ ವಿಠಲ ಕಿಣಿ ಅವರ ಮನೆಗೆ ಪೊಲೀಸ್ ಆಯುಕ್ತ ಸುಧೀರ್ ರೆಡ್ಡಿ ಮತ್ತು ಜಿಲ್ಲಾಧಿಕಾರಿ ದರ್ಶನ್ ಎಚ್.ವಿ. ಅವರು ಭೇಟಿ ನೀಡಿ ಸನ್ಮಾನಿಸಿ, ಗೌರವಿಸಿದರು. ವಿಠಲ ಕಿಣಿ ಅವರೊಂದಿಗೆ ಸಮಾಲೋಚಿಸಿದ ಅವರು, ಸ್ವಾತಂತ್ರ್ಯ ಹೋರಾಟದ ಮಾಹಿತಿ ಪಡೆದರು. ಈ ಸಂದರ್ಭದಲ್ಲಿ ಮಂಗಳೂರು ಉಪವಿಭಾಗಾಧಿಕಾರಿ ಮೀನಾಕ್ಷಿ ಆರ್ಯ, ತಹಶೀಲ್ದಾರ್ ರಮೇಶ್‌ಬಾಬು, ಕಸ್ಬಾ ಕಂದಾಯನಿರೀಕ್ಷಕ ಚೇತನ್ ಉಪಸ್ಥಿತರಿದ್ದರು.


















Edited, Published, Printed by Lalita Kumari (Lalithasri Preetham Rai) Shop N0: 6, Lingamma Towers. Opp. Pandeshwar police station, Pandeshwar Mangaluru 575001. Dakshina Kannada.
All Rights Reserved RNI Ref: 1327299/KARKAN26532. Printed @ N R K Media World, No-10, 'A' 1st floor, 4th cross, 4th main, Gandhinagar Bengaluru-560009. email: karavalitharangini@gmail.com PH: +91 9880109212